# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 122 (1070) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಅಡಗೂರ್ ಹೆಚ್ ವಿಶ್ವನಾಥ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 17.03.2025 |
| ಉತ್ತರಿಸುವ ಸಚಿವರು | : | ಉನ್ನತ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರಿ ಮತ್ತು ಅನುದಾನಿತ ಡಿಪ್ಲೋಮಾ ಕಾಲೇಜುಗಳಲ್ಲಿ ಮಂಜೂರಾದ ಸಹಾಯಕ ಪ್ರಾಧ್ಯಾಪಕರು ಮತ್ತು ಪ್ರಾಧ್ಯಾಪಕರ ಹುದ್ದೆಗಳ ಸಂಖ್ಯೆ ಎಷ್ಟು; | ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಬೋಧಕ ವೃಂದದಲ್ಲಿ ಉಪನ್ಯಾಸಕ ಹುದ್ದೆಗಳು ಮಂಜೂರಾಗಿರುತ್ತದೆ. ಹುದ್ದೆಗಳ ಸಂಖ್ಯೆ ಈ ಕೆಳಕಂಡಂತಿದೆ.<br>• ಸರ್ಕಾರಿ ಪಾಲಿಟೆಕ್ನಿಕ್ : 2746<br>• ಅನುದಾನಿತ ಪಾಲಿಟೆಕ್ನಿಕ್ : 1321 |
| ಆ) | ಮಂಜೂರಾದ ಹುದ್ದೆಗಳಲ್ಲಿ ದಿನಾಂಕ:31.01.2025ಕ್ಕೆ ಅನುದಾನಕ್ಕೊಳಪಟ್ಟ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; | ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ದಿನಾಂಕ:31.01.2025ಕ್ಕೆ ಖಾಲಿ ಇರುವ ಒಟ್ಟು ಉಪನ್ಯಾಸಕರ ಹುದ್ದೆಗಳ ಸಂಖ್ಯೆ:1398<br>• ಸರ್ಕಾರಿ ಪಾಲಿಟೆಕ್ನಿಕ್ : 972<br>• ಅನುದಾನಿತ ಪಾಲಿಟೆಕ್ನಿಕ್ : 426 |
| ಇ) | ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ಕೈಗೊಂಡ ಕ್ರಮಗಳೇನು; ಕ್ರಮಕೈಗೊಳ್ಳದಿದ್ದಲ್ಲಿ ಕಾರಣಗಳೇನು; | ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳ ಉಪನ್ಯಾಸಕರ ಹುದ್ದೆಗಳನ್ನು ಎಐಸಿಟಿಇ ನಿಯಮಗಳ ಪ್ರಕಾರ ಭರ್ತಿ ಮಾಡಬೇಕಾಗಿರುತ್ತದೆ. ಮಾರ್ಚ್ 2019ರಲ್ಲಿ ಪರಿಷ್ಕೃತ 7ನೇ ಎಐಸಿಟಿಇ ನಿಯಮಗಳು ಜಾರಿಗೆ ಬಂದಿವೆ. ಸದರಿ ನಿಯಮಗಳನ್ನು ಅಳವಡಿಸಿಕೊಂಡು, ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ದಿನಾಂಕ:21.02.2025ರಿಂದ ಜಾರಿಗೆ ಬಂದಿರುವ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಆಧರಿಸಿ, ಖಾಲಿ ಇರುವ ಬೋಧಕ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ನಿಯಮಾನುಸಾರ ಕ್ರಮಗಳನ್ನು ಕೈಗೊಳ್ಳಲಾಗುವುದು.<br>ಎಐಸಿಟಿಇ ಪರಿಷ್ಕೃತ ನಿಯಮಗಳ ಅನ್ವಯ, 2020 ರಿಂದ ವಿದ್ಯಾರ್ಥಿ-ಅಧ್ಯಾಪಕ ಅನುಪಾತವನ್ನು ಪರಿಷ್ಕರಿಸಲಾಗಿದೆ. ಪರಿಷ್ಕೃತ ನಿಯಮಗಳ ಪ್ರಕಾರ, ಸಂಸ್ಥೆಗಳಲ್ಲಿ ಖಾಲಿ ಇರುವ ಬೋಧಕ ವೃಂದದ ಹುದ್ದೆಗಳಿಗೆ ನಿಗದಿತ ಕಾರ್ಯಭಾರವಿರುವ ಬಗ್ಗೆ ಪರಿಶೀಲನೆ ನಡೆಸಿ ವರದಿ ಪಡೆದ ನಂತರ, ಕಾರ್ಯಭಾರವಿರುವ ಹುದ್ದೆಗಳ ಭರ್ತಿ ಪ್ರಕ್ರಿಯೆ ಆರಂಭಿಸಲಾಗಿದೆ. |

| | | |
|---|---|---|
| | | ಅನುದಾನಿತ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಗುರುತಿಸಲಾಗಿರುವ ಉಪನ್ಯಾಸಕ ವೃಂದದ ಬ್ಯಾಕ್‌ಲಾಗ್ ಹುದ್ದೆಗಳನ್ನು ಪ್ರಥಮ ಆದ್ಯತೆಯ ಮೇರೆಗೆ ಭರ್ತಿ ಮಾಡುವ ಪ್ರಸ್ತಾವನೆ ಈಗಾಗಲೇ ಪರಿಶೀಲನೆಯಲ್ಲಿದ್ದು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಸುತ್ತೋಲೆ ಸಂಖ್ಯೆ:ಸಿಆಸುಇ 388 ಸೇನೆನಿ 2024, ದಿನಾಂಕ:25.11.2024ರಲ್ಲಿ ಒಳಮೀಸಲಾತಿ ಜಾರಿಯಾಗುವವರೆಗೆ ಹೊಸದಾಗಿ ಹುದ್ದೆಗಳ ನೇಮಕಾತಿಗಾಗಿ ಅಧಿಸೂಚನೆ ಹೊರಡಿಸಬಾರದೆಂದು ತಿಳಿಸಿರುವುದರಿಂದ ಸಮಾಜ ಕಲ್ಯಾಣ ಇಲಾಖೆಯ ಅಭಿಪ್ರಾಯಕ್ಕಾಗಿ ಪ್ರಸ್ತಾವನೆ ಸಲ್ಲಿಸಲಾಗಿದೆ.<br><br>ಬ್ಯಾಕ್‌ಲಾಗ್ ಹುದ್ದೆಗಳನ್ನು ಪ್ರಥಮ ಆದ್ಯತೆಯ ಮೇಲೆ ಭರ್ತಿ ಮಾಡಿದ ನಂತರ, ಎಐಸಿಟಿಇ ನಿಯಮಗಳ ಪ್ರಕಾರ ಕಾರ್ಯಭಾರಕ್ಕನುಗುಣವಾಗಿ ಇತರ ವರ್ಗದ ಬೋಧಕ ಹುದ್ದೆಗಳನ್ನು ನೇರ ನೇಮಕಾತಿಯ ಮೂಲಕ ಭರ್ತಿ ಮಾಡಲು ಕ್ರಮವಹಿಸಲಾಗವುದು. |
| ಈ) | ಖಾಲಿ ಇರುವ ಹುದ್ದೆಗಳಿಂದ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ತೊಂದರೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರ ತೆಗೆದುಕೊಂಡ ಕ್ರಮವೇನು? | ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಖಾಲಿ ಇರುವ ಹುದ್ದೆಗಳ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ಅನುವಾಗುವಂತೆ 1267 ಅತಿಥಿ ಉಪನ್ಯಾಸಕರುಗಳ ಸೇವೆಯನ್ನು ಪಡೆದು ವಿದ್ಯಾರ್ಥಿಗಳ ಶಿಕ್ಷಣಕ್ಕೆ ತೊಂದರೆ ಉಂಟಾಗದಂತೆ ಕ್ರಮ ಕೈಗೊಳ್ಳಲಾಗಿದೆ.<br><br>ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರಿಗೆ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನೀಡುವುದರ ಮೂಲಕ ಹಾಗೂ ಆಡಳಿತ ಮಂಡಳಿಯು ತಮ್ಮ ಸ್ವಂತ ಸಂಪನ್ಮೂಲದಿಂದ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಂಡು, ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ಯಾವುದೇ ತೊಂದರೆಯಾಗದಂತೆ ಕ್ರಮವಹಿಸಲಾಗಿದೆ. |

**ಸಂಖ್ಯೆ:ಇಡಿ 49 ಟಿಪಿಇ 2025**

(ಡಾ. ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು